146ನೇ ಅಧಿವೇಶನ
ನಿ-72
ಕ್ರ-129
ಕಂಪ್ಯೂಟರ್

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಅರುಣ ಶಹಾಪುರ ಇವರು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆ.**

**ವಿಷಯ**

ಅನುದಾನಿತ ಸಂಸ್ಥೆಗಳ ಶಿಕ್ಷಕ ಹಾಗೂ ಸಿಬ್ಬಂದಿ ವರ್ಗದವರಿಗೆ ಸೇವೆಗೆ ಸೇರಿದ ದಿನಾಂಕದಿಂದಲೇ ಸೇವಾ ಸೌಲಭ್ಯಗಳನ್ನು ಒದಗಿಸುವ ಕುರಿತು (ಕಾಲ್ಪನಿಕ ವೇತನ ಬಡ್ತಿ) ಈಗಾಗಲೇ ಸದನ ಸಮಿತಿಗಳನ್ನು ಮಾಡಿ ಆ ಸಮಿತಿಗಳು ತಮ್ಮ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತವೆ. ಆದರೂ ಇಲ್ಲಿಯವರೆಗೂ ಈ ಕಾಲ್ಪನಿಕ ವೇತನ ಬಡ್ತಿ ನೀಡುವ ವಿಚಾರದಲ್ಲಿ ಸರ್ಕಾರವು ಯಾವುದೇ ಕ್ರಮ ಕೈಗೊಳ್ಳದೇ ಇರುವ ಕಾರಣ ಈ ಸಿಬ್ಬಂದಿಗಳು ಹೋರಾಟಗಳನ್ನು ಮಾಡುತ್ತಾ ಬಂದಿದ್ದು, ಕೂಡಲೇ ಇವರುಗಳು ಸೇವೆಗೆ ಸೇರಿದ ದಿನಾಂಕವನ್ನು ಪರಿಗಣಿಸಿ ಪಿಂಚಣಿ, ನಿವೃತ್ತಿ ಎಲ್ಲಾ ಉಪಲಬ್ಧಗಳನ್ನು ಒದಗಿಸಿಕೊಡಲು ಸಮಿತಿಗಳ ವರದಿಯನ್ವಯ ಸರ್ಕಾರ ತಕ್ಷಣ ಕ್ರಮ ಕೈಗೊಂಡು ಈ ಸಮಸ್ಯೆಯನ್ನು ಪರಿಹರಿಸುವ ಬಗ್ಗೆ.

**ಉತ್ತರ**

ಸರ್ಕಾರವು ಅನುದಾನಿತ ಸಿಬ್ಬಂದಿಗಳ ಸೇವಾ ಮತ್ತು ಪಿಂಚಣಿ ಸೌಲಭ್ಯಗಳನ್ನು ನಿಯಂತ್ರಿಸುವ ಸಲುವಾಗಿ ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ (ವೇತನ, ನಿವೃತ್ತಿ ವೇತನ ಮತ್ತು ಇತರೆ ಸೌಲಭ್ಯಗಳ ನಿಯಂತ್ರಣ) ವಿಧೇಯಕ 2014 ಅನ್ನು ಜಾರಿಗೊಳಿಸಿರುತ್ತದೆ.

ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಬಸವರಾಜ ಹೊರಟ್ಟಿರವರ ಅಧ್ಯಕ್ಷತೆಯಲ್ಲಿ 2014-2015 ಮತ್ತು 2017-18 ರಲ್ಲಿ ಸಮಿತಿಗಳನ್ನು ರಚಿಸಲಾಗಿತ್ತು. ಸದರಿ ಸಮಿತಿಗಳಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಉನ್ನತ ಶಿಕ್ಷಣ ಇಲಾಖೆಯ ಅಧಿಕಾರಿಗಳಿದ್ದು, ಆ ಸಮಿತಿಯು ಅನುದಾನರಹಿತ ಸೇವೆಯ ಅವಧಿಯನ್ನು ಪರಿಗಣಿಸಿ ಕಾಲ್ಪನಿಕವಾಗಿ ವೇತನವನ್ನು ನಿಗಧಿಪಡಿಸಿದಲ್ಲಿ, ಸರ್ಕಾರಕ್ಕೆ ಎಷ್ಟು ವಾರ್ಷಿಕ ಆರ್ಥಿಕ ಹೊರೆ ಆಗುವುದೆಂಬ ಬಗ್ಗೆ ಸಭೆ ನಡೆಸಿ, ಸಿಬ್ಬಂದಿಗಳಿಗೆ ಹಾಲಿ ನೀಡಲಾಗುತ್ತಿರುವ ವೇತನಕ್ಕೆ ಅನುದಾನರಹಿತ ಅವಧಿಯನ್ನು ಪರಿಗಣನೆಗೆ ತೆಗೆದುಕೊಂಡು ವೇತನವನ್ನು ಪರಿಷ್ಕರಿಸಿದಲ್ಲಿ ಹೆಚ್ಚುವರಿಯಾಗಿ ವಾರ್ಷಿಕವಾಗಿ ರೂ.359.87 ಕೋಟಿಗಳ ಅನುದಾನ ಅವಶ್ಯಕತೆ ಇರುತ್ತದೆ. ಹಾಗೆಯೇ, ನಿವೃತ್ತಿ ಸೌಲಭ್ಯಗಳ ಒಟ್ಟಾರೆ ಆರ್ಥಿಕ ಹೊರೆ ರೂ.1637.61 ಕೋಟಿಗಳಾಗಿದ್ದು, ಇದರ ವರ್ಷವಾರು ಆರ್ಥಿಕ ಹೊರೆ ಸಹ ಲೆಕ್ಕ ಹಾಕಿರುವುದಿಲ್ಲ. ಈ ಎಲ್ಲಾ ಮೊತ್ತಗಳ ನಿಖರ ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದ್ದು, ಅನುದಾನರಹಿತ ಸೇವಾ ಅವಧಿಯ ಸಂಬಂಧ ನೀಡಬೇಕಾದ ವೇತನ ಬಾಕಿ ಮೊತ್ತ ರೂ.3083.54 ಕೋಟಿಗಳೆಂದು ಅಂದಾಜಿಸಲಾಗಿದೆ.

ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಿಸಿದ್ದ ರಿಟ್ ಅರ್ಜಿ ಸಂಖ್ಯೆ: 21216/2014ಕ್ಕೆ ದಿನಾಂಕ:10-07-2015 ರಲ್ಲಿ ನೀಡಿದ ತೀರ್ಪಿನನ್ವಯ ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ (ವೇತನ, ನಿವೃತ್ತಿ ವೇತನ ಮತ್ತು ಇತರೇ ಸೌಲಭ್ಯಗಳ ನಿಯಂತ್ರಣ) ಅಧಿನಿಯಮ 2014ನ್ನು ಸಂವಿಧಾನದ ಪರಿಚ್ಛೇದ 14ರ ವಿರುದ್ಧವಾಗಿದೆ ಎಂದು ಪರಿಗಣಿಸಿ ಅದನ್ನು ವಜಾಗೊಳಿಸಿದೆ.

ಸದರಿ ತೀರ್ಪಿನ ವಿರುದ್ಧ ರಾಜ್ಯ ಸರ್ಕಾರವು ರಿಟ್ ಅಪೀಲು ಸಂಖ್ಯೆ:2476/2015ನ್ನು ದಾಖಲಿಸಿದ್ದು, ಮಾನ್ಯ ನ್ಯಾಯಾಲಯವು ನೀಡುವ ಅಂತಿಮ ತೀರ್ಪನ್ನು ನಿರೀಕ್ಷಿಸಲಾಗಿದೆ.

ಇಡಿ 48 ಯುಪಿಸಿ 2022

**(ಡಾ: ಅಶ್ವಥ್ ನಾರಾಯಣ ಸಿ.ಎನ್.)**
ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ. ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು